"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

## ಕರ್ನಾಟಕ ವಿಧಾನ ಪರಿಷತ್ತು

19ನೇ ಜುಲೈ 2019
ಶುಕ್ರವಾರ

### ವಿಷಯಾನುಕ್ರಮಣಿಕೆ

1. ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಮುಂದುವರೆದ ಧರಣಿ.

   - ಶ್ರೀ ಐವನ್ ಡಿ'ಸೋಜಾ
   - ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ(ಸರ್ಕಾರದ ಮುಖ್ಯ ಸಚೇತಕರು)
   - ಡಾ:ಜಯಮಾಲ (ಸಭಾನಾಯಕರು)
   - ಶ್ರೀ ಪ್ರಕಾಶ್ ರಾಥೋಡ್

2. ಪ್ರಶ್ನೋತ್ತರಗಳು

   ಅ) ದಿನಾಂಕ 17.07.2019, 18.07.2019 ಮತ್ತು 19.07.2019ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ.

(96)19-07-2019/12.10/ಡಿಎಸ್-ಬಿಎನ್ಎಸ್

## ಕರ್ನಾಟಕ ವಿಧಾನ ಪರಿಷತ್ತು

**ಶುಕ್ರವಾರ, 19ನೇ ಜುಲೈ 2019**

ಸದನವು ವಿಧಾನಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ

ಮಧ್ಯಾಹ್ನ 12 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು.

ಉಪ ಸಭಾಪತಿ(ಶ್ರೀ ಎಸ್.ಎಲ್.ಧರ್ಮೇಗೌಡ)ಅವರು ಪೀಠದಲ್ಲಿ ಉಪಸ್ಥಿತರಿದ್ದರು.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಸದನ ಪ್ರಾರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಬಿಜೆಪಿಯ ಸದಸ್ಯರುಗಳು "ಭಾರತ್ ಮಾತಾ ಕೀ ಜೈ" ಎಂದು ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಗೆ ಬಂದು ಸರ್ಕಾರದ ವಿರುದ್ಧ "ವಿಶ್ವಾಸ ಕಳೆದುಕೊಂಡ ಮಾನ್ಯ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿರವರು ರಾಜೀನಾಮೆ ನೀಡಬೇಕು." "ರಾಜ್ಯಪಾಲರ ಆದೇಶದಂತೆ ವಿಶ್ವಾಸಮತ ಸಾಬೀತು ಮಾಡಬೇಕು," "ಬಹುಮತ ಇಲ್ಲದ ಸರ್ಕಾರ ರಾಜೀನಾಮೆ ನೀಡಿ" ಎಂದು ಫಲಕಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗುತ್ತಿದ್ದರು)**

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಐದು ದಿನಗಳಿಂದ ವಿರೋಧ ಪಕ್ಷದವರು ಬಾವಿಯಲ್ಲಿ ಧರಣಿ ನಡೆಸುತ್ತಿದ್ದಾರೆ, ದಯವಿಟ್ಟು ಅವರವರ ಸ್ಥಾನಗಳಿಗೆ ಹೋಗುವುದಕ್ಕೆ ಆದೇಶ ನೀಡಬೇಕು.

**(ಗೊಂದಲ)**

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ(ಸರ್ಕಾರದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಲ್ಲಿ ವಿಶ್ವಾಸಮತದ ಮೇಲೆ ಚರ್ಚೆ ನಡೆಯುತ್ತಿದೆ. ಚರ್ಚೆ ಮುಗಿದು ಇನ್ನೂ ಮತಕ್ಕೆ ಹಾಕಿಲ್ಲ, ಆಗಲೇ ವಿಶ್ವಾಸ ಕಳೆದುಕೊಂಡಿದ್ದಾರೆ ಎಂದು ಅವರು ಹೇಳುತ್ತಿದ್ದೀರಲ್ಲಾ! ವಿಶ್ವಾಸ ಸಾಬೀತು ಪಡಿಸುವುದಕ್ಕೆ ಇನ್ನೂ ಅವಕಾಶವಿದೆ.

(ಗೊಂದಲ)

**ಡಾ||ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಐದು ದಿನಗಳಿಂದಲೂ ಸದನದ ಬಾವಿಯಲ್ಲಿ ಧರಣಿಯಲ್ಲಿ ನಿರತರಾಗಿದ್ದಾರೆ. ಅವರು ಚರ್ಚೆ ಮಾಡುವುದಕ್ಕೆ ಅವಕಾಶ ಮಾಡಿಕೊಡಲಿ. ಕೆಳಮನೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ವಿಶ್ವಾಸಮತ ಯಾಚನೆಯನ್ನು ಮಂಡಿಸಿ ಚರ್ಚೆ ಪ್ರಾರಂಭ ಮಾಡಿದ್ದಾರೆ.

**(ಗೊಂದಲ)**

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸರ್ಕಾರದ ವಿರುದ್ಧ "ಧಿಕ್ಕಾರ"ದ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ಪ್ರಕಾಶ್ ಕೆ. ರಾಥೋಡ್:-** ಮಾನ್ಯ ಸಭಾಪತಿಯವರೇ, ವಿರೋಧಪಕ್ಷದವರು ರಾಜ್ಯಪಾಲರನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಸಂವಿಧಾನಕ್ಕೆ ಅವಮಾನ ಮಾಡುತ್ತಿದ್ದಾರೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರುಗಳು ತಮ್ಮ ತಮ್ಮ ಸ್ಥಾನಗಳಿಂದಲೇ "ಬಿಜೆಪಿಗೆ ಧಿಕ್ಕಾರ" ಎಂಬ ಘೋಷಣೆಗಳನ್ನು ಕೂಗುತ್ತಿದ್ದರು)**

**ಉಪ ಸಭಾಪತಿಯವರು:-** ಈಗ ಸದನವನ್ನು ಮಧ್ಯಾಹ್ನ 3 ಗಂಟೆ 30 ನಿಮಿಷದವರೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 12 ಗಂಟೆ 13 ನಿಮಿಷಕ್ಕೆ ಮುಂದೂಡಲ್ಪಟ್ಟಿತು)**

**(097) 19.07.2019 03.40 ಎಸ್‌ವಿ-ಕೆಎಸ್**

**(ಮಧ್ಯಾಹ್ನ 12 ಗಂಟೆ 13 ನಿಮಿಷಕ್ಕೆ ಮುಂದೂಡಲ್ಪಟ್ಟ ಸದನವು ಪುನಃ ಮಧ್ಯಾಹ್ನ 03 ಗಂಟೆ 42 ನಿಮಿಷಕ್ಕೆ ಸಮಾವೇಶಗೊಂಡಿತು.)**

**(ಮಾನ್ಯ ಉಪ ಸಭಾಪತಿಯವರು ಸಭಾಪೀಠವನ್ನು ಅಲಂಕರಿಸಿದರು.)**

**(ಈ ಸಂದರ್ಭದಲ್ಲಿ ಧರಣಿ ನಿರತ ವಿರೋಧಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು.)**

**2. ಪ್ರಶ್ನೋತ್ತರಗಳು**

**ದಿನಾಂಕ 17.07.2019, 18.07.2019 ಮತ್ತು 19.07.2019ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ.**

**ಡಾ:ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ,

ಅ) ದಿನಾಂಕ 17.07.2019ರ, ಸಮೂಹ 3ರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 10 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 80 ಪ್ರಶ್ನೆಗಳ ಪೈಕಿ 34 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಆ) ದಿನಾಂಕ 18.07.2019ರ, ಸಮೂಹ–4ರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 67 ಪ್ರಶ್ನೆಗಳ ಪೈಕಿ 51 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ಇ) ದಿನಾಂಕ 19.07.2019ರ, ಸಮೂಹ–5ರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 05 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 68 ಪ್ರಶ್ನೆಗಳ ಪೈಕಿ 10 ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸುತ್ತಿದ್ದೇನೆ.

**ಉಪ ಸಭಾಪತಿಯವರು:–** ಮಂಡಿಸಲಾಯಿತು. ಈಗ ಸದನವನ್ನು ಸೋಮವಾರ ದಿನಾಂಕ 22.07.2019ರ ಮಧ್ಯಾಹ್ನ 12.30 ಗಂಟೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 03 ಗಂಟೆ 43 ನಿಮಿಷಗಳಿಗೆ ಮುಕ್ತಾಯಗೊಂಡಿತು.**
**ಪುನಃ ದಿನಾಂಕ 22ನೇ ಜುಲೈ ಮಾಹೆ 2019ರ**
**ಸೋಮವಾರ ಮಧ್ಯಾಹ್ನ 12 ಗಂಟೆ 30 ನಿಮಿಷಕ್ಕೆ ಸಮಾವೇಶಗೊಳ್ಳಲು ನಿಶ್ಚಯಿಸಿತು.)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"